# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಕೃಷಿ (ಜಲಾನಯನ) ಇಲಾಖೆಯ ಪ್ರಸಕ್ತ ಸಾಲಿನ/ಬಾಕಿ ವೇತನ ಪಾವತಿಗಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಆರ್ಥಿಕ ಇಲಾಖೆ ವೆಚ್ಚ 4 ಶಾಖೆಯ ಕಡತ ಸಂಖ್ಯೆ: ಆಇ 284 ವೆಚ್ಚ 4/2021 ಇ

**ಪ್ರಸ್ತಾವನೆ:**

ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಕೃಷಿ (ಜಲಾನಯನ) ಇಲಾಖೆಯಲ್ಲಿ ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರು, ಬೆಂಗಳೂರು ಕಚೇರಿ ಅಧೀನದ ಸಹಾಯಕ ಕೃಷಿ ನಿರ್ದೇಶಕರು, ಆನೇಕಲ್ ತಾಲ್ಲೂಕಿನ ಕಛೇರಿಯಲ್ಲಿ ಸಹಾಯಕ ಕೃಷಿ ಅಧಿಕಾರಿ ಹುದ್ದೆಯು ವರ್ಗಾವಣೆಯಿಂದ ಭರ್ತಿಯಾಗಿರುವುದರಿಂದ, ಸದರಿಯವರಿಗೆ ಲೆ.ಶೀ.2402–00–104–0–27–005 ರಡಿ ಆಗಸ್ಟ್ 2020 ರಿಂದ ಫೆಬ್ರವರಿ–2021 ರವರೆಗೆ ವೇತನ ಪಾವತಿಸಲು ಅಗತ್ಯವಿರುವ ಒಟ್ಟು ರೂ.10.07 ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ಪ್ರಸ್ತಾವಿತ ವೆಚ್ಚಕ್ಕಾಗಿ ರೂ.10.07ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–196–1–05–300 ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 437 ವೆಚ್ಚ 6/2021(ಇ) ದಿನಾಂಕ: 4ನೇ ಸೆಪ್ಟೆಂಬರ್ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ ವೇತನ ಪಾವತಿಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ10.07ಲಕ್ಷ (ರೂಪಾಯಿ ಹತ್ತು ಲಕ್ಷದ ಏಳು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ–2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು. ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

| ಕ್ರಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515–00–196–1–05ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಬೆಂಗಳೂರು ನಗರ | 2402–00–104–0–27–005 | V416916575 10.07 |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. [illegible]ಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ–2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು–2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಜಿಲ್ಲಾ ಖಜಾನಾಧಿಕಾರಿಗಳು, ಬೆಂಗಳೂರು ನಗರ
7. ರಕ್ಷಾ ಕಡತಕ್ಕೆ 8. ಹೆಚ್ಚುವರಿ ಪ್ರತಿ